ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೦೫

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆರಡನೆಯ ಅಧಿವೇಶನ

## ಶುಕ್ರವಾರ, ದಿನಾಂಕ: ೨೫ನೇ ನವೆಂಬರ್, ೨೦೧೬

---

**ಸಮೂಹ – V**

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು
೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು
೩. ಉನ್ನತ ಶಿಕ್ಷಣ ಸಚಿವರು
೪. ವಸತಿ ಸಚಿವರು
೫. ಸಣ್ಣ ಕೈಗಾರಿಕೆ ಸಚಿವರು
೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು
೭. ಸಾರಿಗೆ ಸಚಿವರು
೮. ಗಣಿ ಮತ್ತು ಭೂವಿಜ್ಞಾನ ಸಚಿವರು

---

### ಹೈದರಾಬಾದ್–ಕರ್ನಾಟಕ ಜಿಲ್ಲೆಗಳಲ್ಲಿ ಸಣ್ಣ ಕೈಗಾರಿಕೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೧ (೬೬೬) ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದರಾಬಾದ್–ಕರ್ನಾಟಕದ ಜಿಲ್ಲೆಗಳಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕೈಗಾರಿಕೆ ಸ್ಥಾಪನೆಗೆ ಕಳೆದ ೩ ವರ್ಷಗಳಿಂದ ಬಿಡುಗಡೆಯಾದ ಅನುದಾನ ಎಷ್ಟು ;

(ಇ) ಹೈದರಾಬಾದ್ ಕರ್ನಾಟಕ ಪ್ರದೇಶದ ಜಿಲ್ಲೆಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪನೆ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಇದಕ್ಕೆ ಬೇಕಾಗುವ ಭೂಮಿಯನ್ನು ವಶಪಡಿಸಿಕೊಳ್ಳಲಾಗಿದೆಯೇ ? (ಕೈಗಾರಿಕಾವಾರು ವಿವರ ನೀಡುವುದು)

## ಬಳ್ಳಾರಿ ಜಿಲ್ಲಾ ವ್ಯಾಪ್ತಿಯಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ಸುವ್ಯವಸ್ಥೆ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೨ (೫೨೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಳ್ಳಾರಿ ಜಿಲ್ಲಾ ವ್ಯಾಪ್ತಿಯಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ನೀಡುತ್ತಿರುವ ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಸಂಖ್ಯೆ ವಿವರ ನೀಡುವುದು)

(ಆ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ನೀಡುತ್ತಿರುವ ಶಾಲೆಗಳಲ್ಲಿ ಕನ್ನಡ ಮತ್ತು ಇತರ ಭಾಷಾ ಮಾಧ್ಯಮ ಶಾಲೆಗಳ ಸಂಖ್ಯೆ ಎಷ್ಟು ; ಮತ್ತು ಅವುಗಳಲ್ಲಿ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ;

(ಇ) ಜಿಲ್ಲೆಯಲ್ಲಿ ವಿದ್ಯಾರ್ಥಿಗಳ ಸಂಖ್ಯಾ ಕೊರತೆ ಎದುರಿಸುತ್ತಿರುವ ಶಾಲೆಗಳು ಮತ್ತು ಅವುಗಳಲ್ಲಿನ ಶೈಕ್ಷಣಿಕ ಗುಣಮೌಲ್ಯಗಳ ವರ್ಧನೆಗಾಗಿ ಸರ್ಕಾರ ಕೈಗೊಂಡ ಕ್ರಮಗಳು ಯಾವುವು ?

## ಕೆ.ಐ.ಎ.ಡಿ.ಬಿ. ವತಿಯಿಂದ ಸ್ವಾಧೀನಪಡಿಸಿಕೊಂಡಿರುವ ಜಮೀನಿನ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೬೩ (೧೪೦) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೆ.ಐ.ಎ.ಡಿ.ಬಿ. ವತಿಯಿಂದ ಕಳೆದ ಐದು ವರ್ಷದಿಂದ ಇದುವರೆವಿಗೂ ಸ್ವಾಧೀನಪಡಿಸಿಕೊಂಡಿರುವ ಜಮೀನಿನ ವಿಸ್ತೀರ್ಣ ಎಷ್ಟು ; ಈ ಜಮೀನನ್ನು ಯಾವ ಯಾವ ಅಭಿವೃದ್ಧಿ ಕಾರ್ಯಗಳಿಗೆ ಉಪಯೋಗಿಸಲಾಗಿದೆ ;

(ಆ) ಕೆ.ಐ.ಎ.ಡಿ.ಬಿ.ಗೆ ಹಸ್ತಾಂತರಿಸಿರುವ ಜಮೀನುಗಳನ್ನು ಕೈಗಾರಿಕೆಗಳಿಗೆ ವಿತರಣೆ ಮಾಡುವಾಗ ರೋಸ್ಟರ್ ನಿಯಮ ಪಾಲಿಸಲಾಗುತ್ತಿದೆಯೇ ; ಅಥವಾ ಇಲ್ಲವೆ; (ವಿವರ ನೀಡುವುದು)

(ಇ) ಕೆ.ಐ.ಎ.ಡಿ.ಬಿ. ವಶಪಡಿಸಿಕೊಂಡಿರುವ ಜಮೀನುಗಳನ್ನು ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದ ರೈತರುಗಳಿಂದ ಎಷ್ಟು ಎಕರೆ ಜಮೀನುಗಳನ್ನು ವಶಪಡಿಸಿಕೊಳ್ಳಲಾಗಿದೆ ? (ವಿವರ ನೀಡುವುದು)

## ಕೇಂದ್ರೀಯ ವಿಶ್ವವಿದ್ಯಾಲಯಕ್ಕೆ ಸಮರ್ಪಕ ನೀರನ್ನು ಒದಗಿಸುವ ಬಗ್ಗೆ

**ಶ್ರೀ ಕೆ.ಬಿ. ಶಾಣಪ್ಪ (ನಾಮನಿರ್ದೇಶನ ಹೊಂದಿದವರು) –**

೬೪ (೭೧೭) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ಜಿಲ್ಲೆಯ, ಕಡಗಂಚಿಯಲ್ಲಿನ ಕೇಂದ್ರೀಯ ವಿಶ್ವವಿದ್ಯಾಲಯವು ಎಷ್ಟು ವರ್ಷದಿಂದ ಕಾರ್ಯನಿರ್ವಹಿಸುತ್ತಿದೆ ; (ವಿವರ ಒದಗಿಸುವುದು)

(ಆ) ಸದರಿ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರೆಷ್ಟು ಹಾಗೂ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿ, ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ;

(ಇ) ಸದರಿ ವಿಶ್ವವಿದ್ಯಾಲಯಕ್ಕೆ ನೀರಿನ ಪೂರೈಕೆ ಯಾವ ರೀತಿಯಲ್ಲಿ ಆಗುತ್ತಿವೆ ;

(ಈ) ಸದರಿ ವಿಶ್ವವಿದ್ಯಾಲಯಕ್ಕೆ ಒಟ್ಟು ಎಷ್ಟು ಪ್ರಮಾಣದ ಕ್ಯೂಸೆಕ್ಸ್ ನೀರಿನ ಅಗತ್ಯವಿದೆ;

(ಉ) ಸದರಿ ವಿಶ್ವವಿದ್ಯಾಲಯಕ್ಕೆ ಒದಗಿಸುತ್ತಿರುವ ನೀರಿನ ಪ್ರಮಾಣವು ಸಾಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಸದರಿ ವಿಶ್ವವಿದ್ಯಾಲಯಕ್ಕೆ ಅಗತ್ಯವಿರುವ ನೀರಿನ ಪ್ರಮಾಣವನ್ನು ಸರಿದೂಗಿಸಲು, ಸರ್ಕಾರ ಹೊಸ ಯೋಜನೆಯನ್ನು ಏನಾದರೂ ಕೈಗೊಂಡಿದೆಯೇ ; ಕೈಗೊಂಡಿದ್ದಲ್ಲಿ, ವಿವರ ನೀಡುವುದು ?

## ಮರಳು ನೀತಿಯನ್ನು ಸರಳೀಕರಿಸುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೫ (೬೯೫) ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಇಲ್ಲಿಯವರೆಗೆ "ಮರಳು ನೀತಿ" ಅಡಿ ಎಷ್ಟು ದಂಡ ವಸೂಲಿ ಮಾಡಲಾಗಿದೆ ಹಾಗೂ ಇಲ್ಲಿಯವರೆಗೆ ಎಷ್ಟು ಪ್ರಕರಣಗಳು ದಾಖಲಾಗಿವೆ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಮರಳು ನೀತಿಯಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ ;

(ಇ) ಮರಳು ನೀತಿಯನ್ನು ಸರಳೀಕರಣ ಮಾಡುವಲ್ಲಿ ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಈ) ಮರಳು ಗಣಿಗಾರಿಕೆಯನ್ನು ತಡೆಯಲು ಸರ್ಕಾರದ ಮುಂದಿರುವ ಯೋಜನೆಗಳು ಯಾವುವು ?

## ಅಲ್ಪಸಂಖ್ಯಾತರ ಸಮುದಾಯಗಳಿಗೆ ಒದಗಿಸುತ್ತಿರುವ ಸೌಲಭ್ಯದ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೬ (೫೪೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯಾದ್ಯಂತ ಅಲ್ಪಸಂಖ್ಯಾತ ಸಮುದಾಯದವರಿಗೆ ಒದಗಿಸಲಾಗುತ್ತಿರುವ ಸೌಲಭ್ಯಗಳ ಬಗ್ಗೆ ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು ;

(ಆ) ರಾಜ್ಯಾದ್ಯಂತ ಈವರೆಗೆ ಎಷ್ಟು ಅಲ್ಪಸಂಖ್ಯಾತರಿಗೆ ಈ ಸೌಲಭ್ಯಗಳನ್ನು ಒದಗಿಸಲಾಗಿದೆ ; (ಜಿಲ್ಲಾವಾರು ಅಂಕಿ ಅಂಶಗಳನ್ನು ನೀಡುವುದು)

(ಇ) ಇನ್ನೂ ಹೆಚ್ಚಿನ ಮಟ್ಟದಲ್ಲಿ ಜನರಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶುದ್ಧ ಕುಡಿಯುವ ನೀರಿನ ಘಟಕಗಳ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೬೭ (೫೧೬) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಶುದ್ಧ ಕುಡಿಯುವ ನೀರಿನ ಘಟಕಗಳೆಷ್ಟು ; ಪ್ರತಿ ಘಟಕಗಳಿಗೆ ನೀಡಲಾಗುವ ಅನುದಾನವೆಷ್ಟು ; (ಗ್ರಾಮಗಳವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಘಟಕಗಳನ್ನು ತೆರೆಯಲು ಇರುವ ಮಾನದಂಡವೇನು ; (ಆದೇಶ ಪ್ರತಿಗಳನ್ನು ನೀಡುವುದು)

(ಇ) ಈ ಯೋಜನೆಯನ್ನು ನೀಡಿರುವ ಗುತ್ತಿಗೆದಾರರ ಹೆಸರು ಹಾಗೂ ಸಂಪೂರ್ಣ ವಿವರ ನೀಡುವುದು ;

(ಈ) ಎಷ್ಟು ಘಟಕಗಳು ಹಾಲಿ ದುರಸ್ಥಿಗೊಳಪಟ್ಟಿವೆ ; ಪದೇ ಪದೇ ಈ ಘಟಕಗಳು ದುರಸ್ಥಿಗೊಳಪಡಲು ಕಾರಣಗಳೇನು ; ಇದರ ದುರಸ್ಥಿ ಕಾರ್ಯವನ್ನು ಮಾಡಲು ಗುತ್ತಿಗೆ ನೀಡಲಾಗಿದೆಯೇ ; ನೀಡಿದ್ದಲ್ಲಿ ಗುತ್ತಿಗೆದಾರರ ಸಂಪೂರ್ಣ ವಿವರ ನೀಡುವುದು ;

(ಉ) ಈ ಯೋಜನೆಯಲ್ಲಿ ಎಷ್ಟು ಹಣ ದುರ್ಬಳಕೆಯಾಗಿದೆ ; ದುರ್ಬಳಕೆಯಾಗಿದ್ದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು ? (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

## ಗಣಿಗಾರಿಕೆ ಪರವಾನಗಿ ಪಡೆಯುವ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೮ (೫೫೬) ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯಾದ್ಯಂತ ಕಳೆದ ಮೂರು ವರ್ಷಗಳಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಗೆ ಗಣಿಗಾರಿಕೆ ಪರವಾನಗಿ ಪಡೆಯಲು ಹೊಸದಾಗಿ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಇದುವರೆವಿಗೂ ವಿಲೇವಾರಿಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿ ಉಳಿದಿರುವ ಅರ್ಜಿಗಳೆಷ್ಟು ; ವಿಲೇಯಾಗದಿರಲು ಕಾರಣಗಳೇನು ; (ಜಿಲ್ಲಾವಾರು, ವರ್ಷವಾರು, ಗಣಿಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಹೊಸದಾಗಿ ಗಣಿಗಾರಿಕೆಗೆ ಯಾವ ನಿಯಮದಡಿ ಅವಕಾಶ ಕಲ್ಪಿಸಿ ಮಂಜೂರಾತಿ ನೀಡಲಾಗಿದೆ ; ಇದಕ್ಕಾಗಿ ಅನುಸರಿಸಿರುವ ಮಾನದಂಡಗಳೇನು; ಗಣಿಗಾರಿಕೆ ನಡೆಸಲು ಪರವಾನಗಿದಾರರು ಹೊಂದಿರಬೇಕಾದ ಅರ್ಹತೆಗಳೇನು? (ಸಂಪೂರ್ಣ ಮಾಹಿತಿ ನೀಡುವುದು)

## ಸರ್ಕಾರಿ ಶಾಲೆಗಳ ಗುಣಮಟ್ಟ ಹೆಚ್ಚಿಸುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೯ (೬೮೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರಿ ಶಾಲೆಗಳ ಗುಣಮಟ್ಟ ಕಡಿಮೆ ಎಂಬ ಸಾಮಾನ್ಯ ಭಾವನೆಯಿಂದ ಸರ್ಕಾರಿ ಶಾಲೆಗೆ ಮಕ್ಕಳನ್ನು ಸೇರಿಸುವುದು ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಖಾಸಗಿ ಶಾಲೆಗಳಂತೆ ಸರ್ಕಾರಿ ಶಾಲೆಗಳ ಗುಣಮಟ್ಟ ಹೆಚ್ಚಿಸಿ, ಮಕ್ಕಳನ್ನು ಮತ್ತು ಪೋಷಕರನ್ನು ಆಕರ್ಷಿಸಲು ಸರ್ಕಾರ ಯೋಜನೆ ರೂಪಿಸಿದೆಯೇ ಅಥವಾ ರೂಪಿಸುವ ಉದ್ದೇಶ ಇದೆಯೇ ;

(ಇ) ಹಾಗಿದ್ದಲ್ಲಿ, ಯೋಜನೆಯ ರೂಪುರೇಷೆಗಳೇನು ; ಸರ್ಕಾರ ಈ ದಿಸೆಯಲ್ಲಿ ಗಂಭೀರ ಚಿಂತನೆ ನಡೆಸುತ್ತದೆಯೇ ?

## ಸಲಿಕ್ಯಾಪೂರ ಮತ್ತು ೯ ಹಳ್ಳಿಗಳಿಗೆ ನೀರು ಸರಬರಾಜು ಕಾಮಗಾರಿ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೦ (೩೭೭) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ಸಲಿಕ್ಯಾಪೂರ ಮತ್ತು ೯ ಹಳ್ಳಿಗಳಿಗೆ ನೀರು ಸರಬರಾಜು ಕಾಮಗಾರಿಯನ್ನು KRIDL (Land army) ಗೆ ಯಾವ ವರ್ಷದಲ್ಲಿ ವಹಿಸಿಕೊಡಲಾಗಿದೆ ;

(ಆ) ಈ ಯೋಜನೆ ಪೂರ್ತಿಗೊಳ್ಳದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಯಾವಾಗ ಪೂರ್ತಿ ಮಾಡಲಾಗುವುದು ;

(ಈ) ಪ್ರಾರಂಭಿಕ ಯೋಜನೆಯ ವೆಚ್ಚ ಎಷ್ಟು ; ಖರ್ಚಾಗಿರುವುದು ಎಷ್ಟು ; ಇನ್ನೂ ಪೂರ್ತಿ ಮಾಡಲು ಬೇಕಾದ ಹಣ ಮತ್ತು ಸಮಯ ಎಷ್ಟು ? (ವಿವರ ನೀಡುವುದು)

## ಗ್ರಾಮ ಪಂಚಾಯಿತ್ತಿಯ ವ್ಯಾಪ್ತಿಯ ಅಂಗಡಿ (ಮನೆ) ಕಟ್ಟಡಗಳನ್ನು ಸಕ್ರಮಗೊಳಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೧ (೧೭೦) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿನ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ ಕಂದಾಯಕ್ಕೆ ಒಳಪಡದೇ, ಅಕ್ರಮವಾಗಿ ಅನಧಿಕೃತ ಕಟ್ಟಡಗಳಿರುವುದು / ಅಂಗಡಿಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿನ ಎಷ್ಟು ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಅನಧಿಕೃತ ಕಟ್ಟಡಗಳು/ಅಂಗಡಿಗಳು/ಮನೆಗಳು ನಡೆಯುತ್ತಿದೆ ; (ಅವುಗಳ ಮಾಹಿತಿ ನೀಡುವುದು)

(ಈ) ಇಂತಹ ಅನಧಿಕೃತ ಕಟ್ಟಡಗಳು/ಅಂಗಡಿಗಳು/ಮನೆಗಳು ಗ್ರಾಮ ಪಂಚಾಯಿತಿಯಿಂದ ತೆರಿಗೆ ವಿಧಿಸಲು ನಿಯಮದಲ್ಲಿ ಅವಕಾಶವಿದೆಯೇ ; ಇದ್ದಲ್ಲಿ, ಆದೇಶದ ಪ್ರತಿ ಒದಗಿಸುವುದು ;

(ಉ) ಅವಕಾಶ ಇಲ್ಲವೆಂದಾದಲ್ಲಿ ಅಂತಹ ಅನಧಿಕೃತ ಕಟ್ಟಡಗಳು/ಅಂಗಡಿಗಳು/ ಮನೆಗಳನ್ನು ಯಾವ ರೀತಿ ತೆರಿಗೆಗೆ ಒಳಪಡಿಸಬಹುದಾಗಿದೆ ; ಇವುಗಳನ್ನು ಸಕ್ರಮ ಮಾಡಲು ಸರ್ಕಾರದ ಕ್ರಮಗಳೇನು ? (ವಿವರ ನೀಡುವುದು)

## ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ ಕಾಲ್ಪನಿಕ ವೇತನ ಸಮಸ್ಯೆ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೬೨ (೭೧೬) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ಖಾಸಗಿ, ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ವಿಧೇಯಕ ೨೦೧೪ರನ್ನು ಇತ್ತೀಚೆಗೆ ಕರ್ನಾಟಕ ಉಚ್ಚ ನ್ಯಾಯಾಲಯ ಅಸಿಂಧು ಎಂದು ತೀರ್ಪು ನೀಡಿದ್ದು, ನಿಜವೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಳ್ಳಲಿರುವ ಮುಂದಿನ ಕ್ರಮಗಳೇನು;

(ಆ) ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ ವಿಧೇಯಕ ೨೦೧೪ಕ್ಕೆ ವಿಧಾನ ಪರಿಷತ್ತಿನಲ್ಲಿ ಒಪ್ಪಿಗೆ ಸೂಚಿಸುವಾಗ ಸರ್ಕಾರದ ಮೇಲೆ ಹೆಚ್ಚುವರಿಯಾಗಿ ೨೪೫ ಕೋಟಿ ರೂಪಾಯಿ ಆರ್ಥಿಕ ಹೊರೆ ಆದಲ್ಲಿ, ಈ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಒಪ್ಪಿಕೊಂಡಿದ್ದು ನಿಜವೇ ;

(ಇ) ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ ವಿಧೇಯಕ ೨೦೧೪ರ ಹಿನ್ನೆಲೆಯಲ್ಲಿ, ಅನುದಾನರಹಿತ ಅವಧಿಯನ್ನು ಪರಿಗಣಿಸಿ ಸಿಬ್ಬಂದಿಗಳಿಗೆ ವಾರ್ಷಿಕ ವೇತನ ಬಡ್ತಿ, ಪದೋನ್ನತಿ ಹಾಗೂ ನಿವೃತ್ತಿ ಸೌಲಭ್ಯಗಳನ್ನು ನೀಡಿದಲ್ಲಿ, ಸರ್ಕಾರದ ಮೇಲೆ ನಿಖರವಾಗಿ ಎಷ್ಟು ಆರ್ಥಿಕ ಹೊರೆ ಬೀಳುತ್ತದೆ ಎಂಬುದನ್ನು ನಿಗಧಿಪಡಿಸಲು ವಿಧಾನ ಪರಿಷತ್ತಿನ ಶಾಸಕರ ಪರಿಶೀಲನಾ ಸಮಿತಿಯನ್ನು ರಚಿಸಲಾಗಿತ್ತು ; ಈ ಸಮಿತಿಯು ಸರ್ಕಾರಕ್ಕೆ ಯಾವಾಗ ವರದಿ ಸಲ್ಲಿಸಿದೆ ; ಈ ವರದಿಯ ಆಧಾರದ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳಿಗೆ ಉಚ್ಚ ನ್ಯಾಯಾಲಯದ ತೀರ್ಪಿನಂತೆ ಅನುದಾನರಹಿತ ಅವಧಿಯನ್ನು ಪರಿಗಣಿಸಿ, ವಾರ್ಷಿಕ ಬಡ್ತಿ, ಪದೋನ್ನತಿ, ನಿವೃತ್ತಿ ವೇತನ ಸೌಲಭ್ಯಗಳನ್ನು ನೀಡುವಲ್ಲಿ ಇರುವ ತೊಂದರೆಗಳೇನು ?

## ಪಠ್ಯ ಪುಸ್ತಕ ಪರಿಷ್ಕರಣೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೭೩ (೫೮೨+೫೮೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಸಂಬಂಧಿಸಿದಂತೆ ಪಠ್ಯ ಪುಸ್ತಕ ಪರಿಷ್ಕರಣೆ ಸಮಿತಿಯನ್ನು ರಚಿಸಲಾಗಿದೆಯೇ ; ರಚಿಸಿದ್ದಲ್ಲಿ, ಯಾವಾಗ ;

(ಆ) ಈ ಸಮಿತಿಯಲ್ಲಿರುವವರ ಹೆಸರು ಹಾಗೂ ಅವರ ಶೈಕ್ಷಣಿಕ ಹಿನ್ನೆಲೆಯ ವಿವರಗಳನ್ನು ಒದಗಿಸುವುದು ;

(ಇ) ಎಷ್ಟು ಅವಧಿಗೆ ಇವರ ನೇಮಕಾತಿ ಮಾಡಲಾಗಿದೆ ; ಹಾಗೂ ಈ ಸಮಿತಿ ಅವಧಿಯನ್ನು ವಿಸ್ತರಿಸಲಾಗಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಈ) ಈ ಸಮಿತಿಯಿಂದ ಇಲ್ಲಿಯವರೆಗೂ ಆಗಿರುವ ಕಾರ್ಯದ ಪ್ರಗತಿ ಏನು ; (ವಿವರ ನೀಡುವುದು)

(ಉ) ಈ ಸಮಿತಿಯಿಂದ ಸರ್ಕಾರಕ್ಕೆ ಬಂದಿರುವ ಶಿಫಾರಸ್ಸು ಹಾಗೂ ಮಧ್ಯಂತರ ತೀರ್ಪುಗಳೇನು, ವರದಿಗಳೇನು ; (ಪ್ರತಿಗಳನ್ನು ಸಂಪೂರ್ಣ ವಿವರಣೆಗಳೊಂದಿಗೆ ನೀಡುವುದು)

(ಊ) ಸದಸ್ಯ ರಾಜ್ಯದಲ್ಲಿರುವ ಪಠ್ಯ ಪುಸ್ತಕವನ್ನು ಎನ್.ಸಿ.ಎಫ್. ೨೦೦೫ರ ಅನುಗುಣವಾಗಿ ಮಾಡಲಾಗಿದೆಯೇ ; ಕೆ.ಸಿ.ಎಫ್. ಅನ್ನು ರಚಿಸಲಾಗಿದೆಯೇ; ಅದಕ್ಕನುಗುಣವಾಗಿ ಪಠ್ಯ ಕ್ರಮವನ್ನು ತಯಾರಿಸಲಾಗಿದೆಯೇ ?

## ರಾಜ್ಯದ ಉದ್ದಿಮೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೪ (೭೦೮) ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲು ಸಂಬಂಧಿಸಿದ ನಿಗಮಗಳಲ್ಲಿ ಅರ್ಜಿ ಸಲ್ಲಿಸಿ, ಬಾಕಿ ಉಳಿಸಿಕೊಂಡಿರುವವರ ಸಂಖ್ಯೆ ಎಷ್ಟು ;

(ಆ) ಭೂಮಿಯನ್ನು ಪಡೆದು ಎಷ್ಟು ವರ್ಷಗಳಿಂದ ನಿರುಪಯುಕ್ತವಾಗಿ ಇಟ್ಟುಕೊಂಡಿದ್ದಾರೆ ; ಅಂತಹ ಫಲಾನುಭವಿಗಳ ಸಂಖ್ಯೆ ಎಷ್ಟು ; (ಹೆಸರು ವಿಳಾಸದೊಂದಿಗೆ ವಿವರ ನೀಡುವುದು)

(ಇ) ಜಾಗತಿಕ ಮಟ್ಟದ ಟೆಂಡರ್ ಕರೆಯುವ ಪದ್ಧತಿಯಿಂದಾಗಿ ಸ್ಥಳೀಯ ಸಣ್ಣ ಕೈಗಾರಿಕೆಗಳು ನೇಪಥ್ಯಕ್ಕೆ ಸಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸಣ್ಣ ಕೈಗಾರಿಕೆಗಳಿಗೆ ಸಬ್ಸಿಡಿ ದೊರೆಯುವಲ್ಲೂ ನಿಧಾನವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ;

(ಉ) ಸಣ್ಣ ಕೈಗಾರಿಕೆಗಳನ್ನು ಪ್ರೋತ್ಸಾಯಿಸಲು ಸರ್ಕಾರ ಹಾಕಿಕೊಂಡಿರುವ ನೂತನ ಯೋಜನೆಗಳಾವುವು ? (ವಿವರ ನೀಡುವುದು)

## ಆಶ್ರಯ ವಸತಿ ಯೋಜನೆಯ ಸಾಲಮನ್ನಾ ಮತ್ತು ಭೂ ಅಡಮಾನ ಮುಕ್ತಗೊಳಿಸುವ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೫ (೬೭೪) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಆಶ್ರಯ ಸಾಲಮನ್ನಾ ಯೋಜನೆಯಡಿ ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; ಪ್ರಸ್ತುತ ಸಾಲಮನ್ನಾವಾದರೂ ಆರ್.ಟಿ.ಸಿ.ಯಲ್ಲಿ ಅಡಮಾನ ಮುಂದುವರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಆರ್.ಟಿ.ಸಿ.ಯಲ್ಲಿ ಅಡಮಾನವನ್ನು ತೆರವುಗೊಳಿಸಲು ಸರ್ಕಾರದ ಕ್ರಮವೇನು; (ಆದೇಶದ ಪ್ರತಿಯನ್ನು ಒದಗಿಸುವುದು)

(ಆ) ರಾಜ್ಯದ ಗ್ರಾಮ ಪಂಚಾಯಿತಿಗಳ ಆಶ್ರಯ ಯೋಜನೆಯಡಿ ಬಾಕಿಯಿರುವ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು) ಈ ಅನುದಾನದಲ್ಲಿ ಹೊಸ ಫಲಾನುಭವಿ ಆಯ್ಕೆಯ ಬಗ್ಗೆ ಸರ್ಕಾರದ ಕ್ರಮವೇನು?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಪಿ7, ಕಾ.ಸೂ. 744, ಪ್ರತಿಗಳು 1500